ಶಿವಮೊಗ್ಗ ಕ್ಷೇತ್ರದ ಸರ್ಕಾರಿ ಶಾಲೆಗಳ ದುರಸ್ತಿ

2005(1885) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ (ಶಿವಮೊಗ್ಗ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಶಿವಮೊಗ್ಗ ವಿಧಾನಸಭಾ ಕ್ಷೇತ್ರದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ದುರಸ್ತಿಗಾಗಿ ಕಳೆದ ಎರಡು ವರ್ಷಗಳಲ್ಲಿ ಬಿಡುಗಡೆಯಾದ ಹಣವೆಷ್ಟು ?

ಆ) ಇತ್ತೀಚೆಗೆ ಶಿವಮೊಗ್ಗ ನಗರದ ದುರ್ಗಿಗುಡಿ ಪ್ರಾಥಮಿಕ ಶಾಲೆಯ ಆರ್.ಸಿ.ಸಿ.ಯು (ಒಳ ಛಾವಣಿ) ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರ ದುರಸ್ತಿಗೆ ಕ್ರಮ ಕೈಗೊಂಡಿದೆಯೇ ? (ವಿವರ ನೀಡುವುದು);

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಶಿವಮೊಗ್ಗ ವಿಧಾನಸಭಾ ಕ್ಷೇತ್ರದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ದುರಸ್ತಿಗಾಗಿ ಕಳೆದ ಎರಡು ವರ್ಷಗಳಲ್ಲಿ ಬಿಡುಗಡೆಯಾದ ಹಣದ ವಿವರ ಈ ಕೆಳಕಂಡಂತಿದೆ.

(ರೂ. ಲಕ್ಷಗಳಲ್ಲಿ)

ವರ್ಷ	ಪ್ರಾಥಮಿಕ		ಪ್ರೌಢ	
	ಯೋಜನೆ	ಯೋಜನೇತರ	ಯೋಜನೆ	ಯೋಜನೇತರ
2000-01	-	12.10	1.50	-
2001-02	14.40	8.10	-	17.50
ಒಟ್ಟು	**14.40**	**20.20**	**1.50**	**17.50**

ಆ) ಬಂದಿದೆ;

ಸದರಿ ಶಾಲೆಯ ಕೊಠಡಿ ದುರಸ್ತಿಗಾಗಿ ರೂ. 5.78 ಲಕ್ಷಗಳ ಅಂದಾಜು ವೆಚ್ಚದ ಪಟ್ಟಿ ತಯಾರಿಸಿದ್ದು 2002-03ನೇ ಸಾಲಿಗೆ ಯೋಜನೆ / ಯೋಜನೇತರದಡಿ ಬಿಡುಗಡೆಯಾಗಿರುವ ಅನುದಾನದಲ್ಲಿ ಕ್ರಮ ಕೈಗೊಳ್ಳುವಂತೆ ಮುಖ್ಯಕಾರ್ಯನಿರ್ವಹಣಾಧಿಕಾರಿಗಳಿಗೆ ತಿಳಿಸಲಾಗಿದೆ.

ರಾಜ್ಯದಲ್ಲಿ ಹೊಸ ಖಾಸಗಿ ಟಿ.ಸಿ.ಎಚ್. ಕಾಲೇಜುಗಳನ್ನು ಪ್ರಾರಂಭಿಸುವ ಬಗ್ಗೆ

2006(1883) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಹೊಸ ಖಾಸಗಿ ಟಿ.ಸಿ.ಹೆಚ್. ಕಾಲೇಜ್ ಪ್ರಾರಂಭಿಸುವ ಬಗ್ಗೆ ಸರ್ಕಾರಕ್ಕೆ ಎಷ್ಟು ಅರ್ಜಿಗಳು ಸಲ್ಲಿಸಲ್ಪಟ್ಟಿರುತ್ತವೆ; ಯಾವಾಗ ಅನುಮತಿ ನೀಡಲಾಗುವುದು? (ವಿವರ ನೀಡುವುದು) ?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) 637 ಅರ್ಜಿಗಳು ಸಲ್ಲಿಸಲ್ಪಟ್ಟಿದ್ದು, ವಿಷಯ ಪರಿಶೀಲನೆಯಲ್ಲಿದೆ.

ಕೊರಟಗೆರೆ ಕ್ಷೇತ್ರ ವ್ಯಾಪ್ತಿಯಲ್ಲಿ ಗ್ರಂಥಾಲಯಗಳ ಸ್ಥಾಪನೆ

2007(1880) ಶ್ರೀ ಚಿನ್ನಿಗಪ್ಪ. ಸಿ (ಕೊರಟಗೆರೆ) : ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯಗಳು, ಮುದ್ರಣ ಹಾಗೂ ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೊರಟಗೆರೆ ಕ್ಷೇತ್ರ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಹೊಸದಾಗಿ ಮಂಜೂರು ಮಾಡಲಾದ ಗ್ರಂಥಾಲಯಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು);